ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ
ದಿನಾಂಕ : DATE : 2/11/20

# ಇನ್ನು 1 ವರ್ಷ ಕನ್ನಡ ಕಾಯಕ ವರ್ಷ

## ಕನ್ನಡ ಭಾಷೆಯ ರಕ್ಷಣೆಗೆ ರಾಜ್ಯ ಸರ್ಕಾರದಿಂದ ವಿಶೇಷ ಕಾರ್ಯಕ್ರಮ: ಬಿಎಸ್‌ವೈ ಘೋಷಣೆ


• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕನ್ನಡ ಭಾಷೆ, ನಾಡು-ನುಡಿ ಕಾಪಾಡುವ ನಿಟ್ಟಿನಲ್ಲಿ ಒಂದು ವರ್ಷದ ಕಾಲ 'ಕನ್ನಡ ಕಾಯಕ ವರ್ಷ'ವನ್ನಾಗಿ ಆಚರಿಸಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಘೋಷಿಸಿದ್ದಾರೆ.

ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಆಯೋಜಿಸಿದ್ದ 65ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಭುವನೇಶ್ವರಿ ದೇವಿಗೆ ಪುಷ್ಪನಮನ ಹಾಗೂ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕನ್ನಡ ಭಾಷೆಗೆ ಅದರದ್ದೇ ಆದ ಸೌಂದರ್ಯ ಹಾಗೂ ಸತ್ವವಿದೆ. ಅದನ್ನು ಕಾಪಾಡುವ ಹೊಣೆ ನಮ್ಮ ಮೇಲಿರುವುದರಿಂದ ನಾಡು-ನುಡಿ ಉಳಿಸಿ ಬೆಳೆಸುವುದಕ್ಕಾಗಿ ಇಂದಿನಿಂದ 2021ರ ಅಕ್ಟೋಬರ್ 31ರ ವರೆಗಿನ ಅವಧಿಯನ್ನು ಕನ್ನಡ ಕಾಯಕ ವರ್ಷವನ್ನಾಗಿ ಆಚರಿಸಲಾಗುವುದು. ಕಾಯಕ ವರ್ಷದ ಅಂಗವಾಗಿ ಹಮ್ಮಿಕೊಳ್ಳಬೇಕಿರುವ ಕಾರ್ಯಕ್ರಮಗಳ ರೂಪರೇಷೆ ಸಿದ್ಧಪಡಿಸಲಾಗುತ್ತಿದ್ದು, ಶೀಘ್ರವೇ ಪ್ರಕಟಿಸಿ ಜಾರಿಗೊಳಿಸಲಾಗುವುದು ಎಂದು ತಿಳಿಸಿದರು.

ಆಡಳಿತದ ಎಲ್ಲ ಹಂತದಲ್ಲೂ ಕನ್ನಡ ಭಾಷೆಯ ಬಳಕೆ ಕಡ್ಡಾಯ ಮಾಡಲಾಗಿದೆ. ಜನತೆ ಸಹ ಕನ್ನಡ ಭಾಷೆ ಉಳಿವಿಗೆ ಕನ್ನಡದಲ್ಲಿಯೇ ಮಾತನಾಡಬೇಕು. ನಿತ್ಯ ಜೀವನದ ವ್ಯವಹಾರಗಳಲ್ಲಿ ಕನ್ನಡ ಬಳಸಿ, ಮನೆಯಲ್ಲಿ ಮಕ್ಕಳ ಜತೆ ಕನ್ನಡದಲ್ಲೇ ಮಾತನಾಡಿ, ಮಕ್ಕಳು ಕನ್ನಡ ಭಾಷೆ ಕಲಿಯುವುದರಿಂದ ಭಾಷೆ ಉಳಿವಿಗೆ ಸಹಕಾರಿಯಾಗುತ್ತದೆ ಎಂದು ಕರೆ ನೀಡಿದರು. ↘8



ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಭುವನೇಶ್ವರಿ ದೇವಿಗೆ ಪುಷ್ಪನಮನ ಸಲ್ಲಿಸಿದರು. ಸಚಿವ ಸುರೇಶ್‌ಕುಮಾರ್ ಮತ್ತಿತರರು ಭಾಗವಹಿಸಿದ್ದರು.

## ಮೋದಿ, ಶಾ ಕನ್ನಡದಲ್ಲಿ ಟ್ವೀಟ್

ನವದೆಹಲಿ: ಭಾನುವಾರ 65ನೇ ಕನ್ನಡ ರಾಜ್ಯೋತ್ಸವ ಆಚರಿಸಿಕೊಂಡ ಕರ್ನಾಟಕ ಮತ್ತು ಅದರ ಜನತೆಗೆ ಉಪರಾಷ್ಟ್ರಪತಿ ವೆಂಕಯ್ಯನಾಯ್ಡು, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಕನ್ನಡದಲ್ಲೇ ಶುಭ ಕೋರಿದ್ದಾರೆ. ಮೂವರು ನಾಯಕರು ಟ್ವೀಟರ್‌ನಲ್ಲಿ ಕರ್ನಾಟಕ ಮತ್ತು ಕನ್ನಡಿಗರಿಗೆ ಶುಭ ಕೋರಿದ್ದಾರೆ.

ಕರ್ನಾಟಕದ ನನ್ನ ಸಹೋದರ ಮತ್ತು ಸಹೋದರಿಯರಿಗೆ ಕನ್ನಡ ರಾಜ್ಯೋತ್ಸವದ ಶುಭಾಶಯಗಳು. ಕನ್ನಡಿಗರ ಜನ ಶಕ್ತಿ ಮತ್ತು ಕೌಶಲ್ಯದಿಂದ ಕರ್ನಾಟಕ ಪ್ರಗತಿಯ ಉತ್ತುಂಗಕ್ಕೇರುತ್ತಿದೆ. ಕರ್ನಾಟಕದ ಜನತೆಯ ಸಂತಸ ಮತ್ತು ಉತ್ತಮ ಆರೋಗ್ಯಕ್ಕಾಗಿ ನಾನು ಪ್ರಾರ್ಥಿಸುತ್ತೇನೆ ಎಂದು ಮೋದಿ ಶುಭ ಹಾರೈಸಿದ್ದಾರೆ.

## ಏನಿದು ಕನ್ನಡ ಕಾಯಕ ವರ್ಷ?

### ಬ್ಯಾಂಕ್‌ನಲ್ಲಿ ಕನ್ನಡ ಬಳಕೆಗೆ ರಾಜ್ಯ ಸರ್ಕಾರದ ನೆರವು

'ಕನ್ನಡ ಕಾಯಕ ವರ್ಷ'ದಲ್ಲಿ ಜನರಿಗೆ ಕನ್ನಡ ಬಳಸಲು ಪ್ರೋತ್ಸಾಹ
ಬಿಎಸ್‌ವೈ ಘೋಷಿಸಿದ ಯೋಜನೆ ಬಗ್ಗೆ ವಿವರ ನೀಡಿದ ನಾಗಾಭರಣ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದ ಜನರು ಬ್ಯಾಂಕಿಂಗ್ ವ್ಯವಹಾರ, ಮೊಬೈಲ್, ಅನ್ಯ ಭಾಷಿಕರೊಂದಿಗೆ ಮಾತನಾಡುವ ಸಂದರ್ಭ ಸೇರಿದಂತೆ ದೈನಂದಿನ ವ್ಯವಹಾರದಲ್ಲಿ ಸರಳವಾಗಿ ಕನ್ನಡ ಬಳಕೆ ಮಾಡಲು ಎಲ್ಲಾ ನೆರವು ನೀಡುವುದೇ 'ಕನ್ನಡ ಕಾಯಕ ವರ್ಷ'ದ ಉದ್ದೇಶವಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್. ನಾಗಾಭರಣ ತಿಳಿಸಿದ್ದಾರೆ.



ರಾಜ್ಯದಲ್ಲಿ ಒಂದು ವರ್ಷ 'ಕನ್ನಡ ಕಾಯಕ ವರ್ಷ' ಆಚರಿಸು ವುದಾಗಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಘೋಷಿಸಿರುವ ಹಿನ್ನೆಲೆಯಲ್ಲಿ ಕಾಯಕ ವರ್ಷದ ರೂಪರೇಷೆಗಳ ಕುರಿತು ಅವರು 'ಕನ್ನಡಪ್ರಭ'ದೊಂದಿಗೆ ಮಾತನಾಡಿದರು.

ಜನ ಸಾಮಾನ್ಯರು ಸಾಮಾನ್ಯವಾಗಿ ಬ್ಯಾಂಕಿಂಗ್ ವ್ಯವಹಾರಗಳನ್ನು ಇಂಗ್ಲಿಷ್‌ನಲ್ಲಿಯೇ ಮಾಡಬೇಕು ಎಂದುಕೊಂಡಿದ್ದಾರೆ. ಇದನ್ನು ಬದಲಾಯಿಸಲು ಚಲನ್, ಚೆಕ್ ಹಾಗೂ ಇನ್ನಿತರ ಅರ್ಜಿಗಳನ್ನು ತುಂಬುವ ವೇಳೆ ಕನ್ನಡ ಬಳಸುವಂತೆ ಜಾಗೃತಿ ಮೂಡಿಸಲಾಗುತ್ತದೆ. ಅದೇ ರೀತಿ ಆಮಂತ್ರಣ ಪತ್ರಿಕೆಯಲ್ಲಿ ಕನ್ನಡ, ಮನೆಯ ಮುಂಭಾಗದಲ್ಲಿನ ಬೋರ್ಡ್‌ಗಳಲ್ಲಿ ಕನ್ನಡ ಬಳಕೆ, ಅಂಕಿ-ಸಂಖ್ಯೆಗಳಲ್ಲಿ ಕನ್ನಡ, ಲೆಟರ್ ಹೆಡ್‌ನಲ್ಲಿ, ಮೊಹರುಗಳಲ್ಲಿ (ಸೀಲ್)ಕನ್ನಡ ಸೇರಿದಂತೆ ನಮಗೆ ಗೊತ್ತಿಲ್ಲದಂತೆ ಲೋಕರೂಢಿಯಾಗಿ ಬಳಸುತ್ತಿರುವ ಇಂಗ್ಲಿಷ್ ಭಾಷೆಯನ್ನು ಕನ್ನಡದಲ್ಲಿ ಬಳಸುವಂತೆ ಮಾಡುವ ಕೆಲಸಕ್ಕೆ ಮುಂದಾಗಿದ್ದೇವೆ ಎಂದರು.

ಇ-ಮೇಲ್, ಮೊಬೈಲ್ ಬಳಕೆಯಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ 'ಯೂನಿಕೋಡ್' ಲಿಪಿ ತಂತ್ರಾಂಶವನ್ನೇ ಬಳಸಿದರೆ ಅನುಕೂಲವಾಗಲಿದೆ. ನುಡಿ, ಶ್ರೀಲಿಪಿ, ಬರಹ, ತುಂಗಾ ಫಾಂಟ್‌ಗಳನ್ನು ಬಳಸಿದರೆ ಓದಲು ತಾಂತ್ರಿಕವಾಗಿ ಸಮಸ್ಯೆಯಾಗಲಿದೆ. ಆದ್ದರಿಂದ ಯೂನಿಕೋಡ್ ಬಳಕೆಗೆ ಒತ್ತು ನೀಡಬೇಕಿದೆ ಎಂದರು. ↘8

## ರಾಜ್ಯಾದ್ಯಂತ ಸಂಭ್ರಮದ ರಾಜ್ಯೋತ್ಸವ

ಬೆಂಗಳೂರು: ರಾಜ್ಯಾದ್ಯಂತ ಭಾನುವಾರ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನಡೆಸಿದರು. ಕೊರೋನಾ ಮಾರ್ಗಸೂಚಿ ಅನ್ವಯ ಕಾರ್ಯಕ್ರಮಗಳು ನಡೆದವು. ಮರಾಠಿಗರ ಪ್ರಾಬಲ್ಯವಿರುವ ಚಿಕ್ಕೋಡಿ ತಾಲೂಕಿನ ಮಾಂಜರಿ ಗ್ರಾಮದಲ್ಲಿ ಮರಾಠಿಗರೇ ಹೆಚ್ಚಾಗಿ ಭಾಗವಹಿಸಿ 65ನೇ ಕನ್ನಡ ರಾಜ್ಯೋತ್ಸವ ಆಚರಿಸಿದರು.

## ಎಂಇಎಸ್ ಕರಾಳ ದಿನ ಫ್ಲಾಪ್‌ಶೋ

ಬೆಳಗಾವಿ: ಕನ್ನಡ ರಾಜ್ಯೋತ್ಸವ ವಿರೋಧಿಯಾಗಿ ನಾಡದ್ರೋಹಿ ಎಂಇಎಸ್ ಆಚರಿಸಿಕೊಂಡು ಬರುತ್ತಿರುವ ಕರಾಳ ದಿನ ಭಾನುವಾರ ಸಂಪೂರ್ಣ ನೀರಸವಾಗಿತ್ತು. ಕರಾಳ ದಿನಾಚರಣೆಯಲ್ಲಿ ಜನರೇ ಇರಲಿಲ್ಲ. ಎಂಇಎಸ್ ರ್‍ಯಾಲಿ ನಡೆಸಲು ಜಿಲ್ಲಾಡಳಿತ ಅನುಮತಿ ನೀಡಲಿಲ್ಲ. ಕಪ್ಪುಬಲೂನ್ ಹಾರಿಸುವ ಕಾರ್ಯಕ್ರಮವೂ ನಡೆಯಲಿಲ್ಲ. ವಿವರ ↘8

**ವಿಶೇಷ ಕಾರ್ಯಕ್ರಮ** ರಾಜ್ಯೋತ್ಸವ ಸಮಾರಂಭದ ವೇಳೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಂದ ಘೋಷಣೆ

# ರಾಜ್ಯದಲ್ಲಿ ಇನ್ನು 1 ವರ್ಷ ಕನ್ನಡ ಕಾಯಕ ವರ್ಷ

◄ ಮೊದಲ ಪುಟದಿಂದ

**ಕನ್ನಡ ಮಾಧ್ಯಮ ಶಾಲೆಗಳಿಗೆ ಬಲ:** ಕೇಂದ್ರ ಸರ್ಕಾರದ ರಾಷ್ಟ್ರೀಯ ಶಿಕ್ಷಣ ನೀತಿ ಮಾತೃಭಾಷೆ, ಪ್ರಾದೇಶಿಕ ಭಾಷೆಯ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಿರುವುದರಿಂದ ಕನ್ನಡ ಮಾಧ್ಯಮ ಶಾಲೆಗಳಿಗೆ ಮತ್ತಷ್ಟು ಬಲ ಬರಲಿದೆ. ಕನ್ನಡ ನಾಡು- ನುಡಿ, ಜಲ ವಿಷಯದಲ್ಲಿ ಭಾವೋದ್ವೇಗ, ಭಾವನಾತ್ಮಕತೆ ಮತ್ತು ತಾಯ್ನಾಡಿನ ಮೇಲಿನ ಅಪರಿಮಿತ ಪ್ರೀತಿ ಎಲ್ಲವೂ ಮುಖ್ಯ. ಆದರೆ, ಇವೆಲ್ಲವೂ ಒಂದು ದಿನದ ಆಚರಣೆಯಲ್ಲಿ ಕೈತೊಳೆದ ನೀರಿನಂತೆ ವ್ಯರ್ಥವಾಗಿ ಹೋಗಬಾರದು. ಕನ್ನಡ ಉಳಿಸಿ, ಬೆಳೆಸುವ ಮತ್ತು ಬದುಕಿನ ಜೀವನಾಡಿಯಾಗಿಸುವ ನಿಟ್ಟಿನಲ್ಲಿ ನವೆಂಬರ್ ತಿಂಗಳಿಗೆ ಸೀಮಿತವಾಗದೇ ವರ್ಷ ಪೂರ್ತಿ ಕನ್ನಡದ ಕಾರ್ಯಕ್ರಮ ನಿರಂತರವಾಗಿ ನಡೆಯುವಂತೆ ಕಾರ್ಯಸೂಚಿ ಹೊಂದುವುದು ಅತಿ ಮುಖ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

## ಏನಿದು ಕನ್ನಡ ಕಾಯಕ ವರ್ಷ?

◄ ಮೊದಲ ಪುಟದಿಂದ

**ಇಂದಿನಿಂದ ಎಲ್ಲಾ ಇಲಾಖೆಗೂ ಪತ್ರ:** ತಂತ್ರಾಂಶದಲ್ಲಿ ಕನ್ನಡ ಅಳವಡಿಕೆ, ಕಚೇರಿ ಅವಧಿಯಲ್ಲಿ ಕನ್ನಡ ಬಳಕೆ, ಸರ್ಕಾರಕ್ಕೆ ಕಳುಹಿಸುವ ಅಂತಿಮ ನೀತಿ-ನಿಯಮಗಳು, ರಾಜ್ಯಪತ್ರಗಳು, ಆದೇಶಗಳು, ಪ್ರಕಟಣೆಗಳು, ಲೋಕೋಪಯೋಗಿ ಇಲಾಖೆ ರಸ್ತೆಗಳಲ್ಲಿ ನಿರ್ಮಿಸುವ ಮೈಲಿಗಲ್ಲುಗಳನ್ನು ಕನ್ನಡದಲ್ಲಿಯೇ ಪ್ರಕಟಿಸುವುದು ಸೇರಿದಂತೆ ಇಲಾಖೆ ವ್ಯಾಪ್ತಿಯ ಕೆಲಸಗಳನ್ನು ಕನ್ನಡದಲ್ಲಿಯೇ ನಡೆಸಬೇಕು ಎಂಬ ನಿರ್ದೇಶನದೊಂದಿಗೆ ರಾಜ್ಯ ಸರ್ಕಾರದ 49 ಹಾಗೂ ಕೇಂದ್ರ ಸರ್ಕಾರದ 100 ಕ್ಕೂ ಹೆಚ್ಚಿನ ಇಲಾಖೆಗಳಿಗೆ ಸೋಮವಾರದಿಂದ ಪತ್ರ ಬರೆಯಲಾಗುತ್ತದೆ ಎಂದು ತಿಳಿಸಿದರು.

**ತಂತ್ರಜ್ಞಾನದ ಆಧುನಿಕ ಸ್ಪರ್ಶ:** ತಂತ್ರಜ್ಞಾನದ ಈ ಯುಗದಲ್ಲಿ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಲು ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಪ್ರತಿಯೊಂದು ಕ್ಷೇತ್ರದಲ್ಲಿಯೂ ತಂತ್ರಜ್ಞಾನ ಬದುಕನ್ನು ಆವರಿಸಿಕೊಂಡಿದ್ದು, ಇದು ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಮೇಲೂ ತನ್ನ ಛಾಪು ಮೂಡಿಸಿದೆ. ಶರವೇಗದಲ್ಲಿ ಬೆಳೆಯುತ್ತಿರುವ ಮಾಹಿತಿ ತಂತ್ರಜ್ಞಾನಕ್ಕೆ ತಕ್ಕಂತೆ ನಾವು ಭಾಷೆಯನ್ನು ಸಜ್ಜುಗೊಳಿಸುವುದು ಅನಿವಾರ್ಯವಾಗಿದೆ. ಹಲವು ಸಂಘ ಸಂಸ್ಥೆಗಳು, ಕನ್ನಡ ಗಣಕ ಪರಿಷತ್ತು ಹಾಗೂ ರಾಜ್ಯದ ವಿಶ್ವವಿದ್ಯಾಲಯಗಳು ಕನ್ನಡ ಭಾಷೆಯಲ್ಲಿ ಕಂಪ್ಯೂಟರೀಕರಣದ ಕೆಲಸವನ್ನು ಮಾಡುತ್ತಿವೆ. ಹೀಗಿದ್ದರೂ ನಾವು ಸಾಗಬೇಕಾದ ದಾರಿ ಸಾಕಷ್ಟಿದೆ ಎಂದು ಹೇಳಿದರು. ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳಿಗೂ ಹೆಚ್ಚಿನ ಇತಿಹಾಸವಿದೆ. ಜಗತ್ತಿನಲ್ಲಿ ಅತ್ಯುತ್ತಮ ಸಾಹಿತ್ಯ ಸಂಪತ್ತನ್ನು ಹೊಂದಿರುವ ಕೆಲವೇ ಭಾಷೆಗಳಲ್ಲಿ ಕನ್ನಡವೂ ಒಂದಾಗಿದೆ. ಬೇರೆ ಬೇರೆ ಸಂಸ್ಥಾನಗಳಲ್ಲಿ ಚೆಲ್ಲಾಪಿಲ್ಲಿಯಾಗಿ ಹಂಚಿಹೋಗಿದ್ದ ಕನ್ನಡ ಪ್ರದೇಶಗಳು ಏಕೀಕರಣಗೊಂಡು ಕರ್ನಾಟಕ ರಾಜ್ಯ ಉದಯವಾದದ್ದು ದೊಡ್ಡ ಹೋರಾಟದ ಪ್ರತಿಫಲವಾಗಿದೆ. ಏಕೀಕರಣಕ್ಕಾಗಿ ಹೋರಾಡಿದ ಮಹನೀಯರು ಹಾಕಿಕೊಟ್ಟಿರುವ ಮಾರ್ಗದಲ್ಲಿ ನಾವೆಲ್ಲರೂ ಸಾಗೋಣ. ಅಖಂಡ ಕರ್ನಾಟಕದ ಸಮಗ್ರ ಅಭಿವೃದ್ಧಿಯ ಕಡೆಗೆ ಕೊಂಡೊಯ್ಯೋಣ ಎಂದು ಕರೆ ನೀಡಿದರು.



**ಕೊರೋನಾ ಬಗ್ಗೆ ಆತಂಕ ಪಡಬೇಡಿ:** ಜಗತ್ತು ಕೊರೋನಾ ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿದೆ. ರಾಜ್ಯದಲ್ಲಿಯೂ ಸರ್ಕಾರ ಮತ್ತು ಜನತೆ ಜೊತೆಯಾಗಿ ಈ ಸವಾಲನ್ನು ದಿಟ್ಟವಾಗಿ ಮತ್ತು ಅತ್ಯಂತ ಸಮರ್ಥವಾಗಿ ನಿಭಾಯಿಸುತ್ತಿದ್ದು, ಆತಂಕಪಡುವ ಅವಶ್ಯಕತೆ ಇಲ್ಲ. ಮಾಸ್ಕ್ ಧಾರಣೆ, ಸಾಮಾಜಿಕ ಅಂತರ, ವೈಯಕ್ತಿಕ ಮತ್ತು ಸಾಮಾಜಿಕ ಸ್ವಚ್ಛತೆಯನ್ನು ಕಾಪಾಡಿದರೆ ಮಹಾಮಾರಿಯನ್ನು ಓಡಿಸಬಹುದಾಗಿದೆ. ಕೊರೋನಾದಿಂದ ಕೈಗಾರಿಕಾ ವಲಯ, ಆರ್ಥಿಕ ವಲಯ, ಶಿಕ್ಷಣ ಮತ್ತು ಶ್ರಮಿಕರು ಸಂಕಷ್ಟಕ್ಕೀಡಾಗಿದ್ದು, ಸಮಸ್ಯೆಯಿಂದ ಹೊರಬರುವ ಎಲ್ಲಾ ಪ್ರಯತ್ನಗಳನ್ನು ಸರ್ಕಾರ ಮಾಡುತ್ತಿದೆ ಎಂದು ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರಾದ ರಿಜ್ವಾನ್ ಅರ್ಷದ್ ಹಾಗೂ ಇಲಾಖೆ ಅಧಿಕಾರಿಗಳು ಹಾಜರಿದ್ದರು.